ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರವರಿ, 2021

ವಿಶೇಷಚೇತನರಿಗೆ ನೀಡುವ ಮಾಶಾಸನವು ನಿಂತುಹೋಗಿರುವ ಬಗ್ಗೆ

ಶ್ರೀ ಎಂ. ಪಿ. ಸುನೀಲ್ ಸುಬ್ರಮಣಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

475 (485) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ವಿಶೇಷಚೇತನರ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ಹತ್ತು ತಿಂಗಳಿನಿಂದ ವಿಶೇಷಚೇತನರಿಗೆ ನೀಡುವ ಮಾಶಾಸನವು ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ವಿಶೇಷಚೇತನರು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಡಿಯಲ್ಲಿ ಬರುವುದರಿಂದ ಇವರುಗಳಿಗೆ ಒಂದು ಸರ್ವೇ ಕಾರ್ಯವನ್ನು ಮಾಡಿ, ಹೋಬಳಿ ಮಟ್ಟದಲ್ಲಿ ಅದಾಲತ್‌ಗಳನ್ನು ನಡೆಸಿ ಅವರುಗಳ ಸಮಸ್ಯೆಗಳನ್ನು ಸರಿಪಡಿಸಲು ಸರ್ಕಾರದ ನಿಲುವೇನು? (ವಿವರ ನೀಡುವುದು)